ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ವಿಶ್ವವಿದ್ಯಾಲಯಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

936 (1179) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಒಟ್ಟು ಇರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ; ಮತ್ತು ಯಾವುವು ; ಪ್ರಸ್ತುತ ಪೂರ್ಣ ಪ್ರಭಾರದೊಂದಿಗೆ ಕಾರ್ಯ ನಿರ್ವಹಿಸುತ್ತಿರುವ ಕುಲಪತಿಗಳ ವಿವರ ಹಾಗೂ ಪ್ರಭಾರದೊಂದಿಗೆ ಕಾರ್ಯ ನಿರ್ವಹಿಸುತ್ತಿರುವ ಕುಲಪತಿಗಳ, ವಿಶ್ವ ವಿದ್ಯಾಲಯಗಳ ವಿವರಗಳನ್ನು ಒದಗಿಸುವುದು ;

(ಆ) ಖಾಲಿ ಇರುವ ಕುಲಪತಿಗಳ ವಿಶ್ವವಿದ್ಯಾಲಯಗಳು ಯಾವುವು ; (ವಿವರವನ್ನು ಒದಗಿಸುವುದು) ಕುಲಪತಿಗಳ ನೇಮಕ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಇ) ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರರ ಹುದ್ದೆಗಳು ಯಾವುವು ಮತ್ತು ಎಷ್ಟು ; (ಪದನಾಮ ಸಹಿತ ವಿವರವನ್ನು ನೀಡುವುದು) ಮಂಜೂರಾದ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; (ವಿಶ್ವವಿದ್ಯಾಲಯಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಎಲ್ಲಾ ವಿಶ್ವವಿದ್ಯಾಲಯಗಳು ಕ್ರಮ ವಹಿಸಿವೆಯೇ ; ಕ್ರಮ ವಹಿಸಿದ್ದಲ್ಲಿ ನೇಮಕಾತಿ ಪ್ರಕ್ರಿಯೆ ಯಾವಾಗ ನಡೆಯುವುದು ; ಹಾಗೂ ನೇಮಕಾತಿ ಮಾಡಿಕೊಳ್ಳಲು ಇರುವ ನಿಯಮಾವಳಿಗಳೇನು ; ಎಲ್ಲಾ ವಿಶ್ವವಿದ್ಯಾಲಯಗಳಿಗೂ ಒಂದೇ ನಿಯಮ ಅನ್ವಯಿಸುವುದೇ? (ನಿಯಮಾವಳಿ ಗಳ ವಿವರ ನೀಡುವುದು)